ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume:05 ಸಂಪುಟ: 05 | Issue:208 ಸಂಚಿಕೆ: 208 | Date:10-09-2026 Thursday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಸಣ್ ಸುದ್ದಿ

## ಹಿರೇಹಳ್ಳಿ ಕೆರೆ ಒತ್ತುವರಿ ತೆರವು

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು: ಅರಣ್ಯ ಒತ್ತುವರಿದಾರರಿಗೆ ಸಿಂಹಸ್ವಪ್ನವಾಗಿದ್ದ ಈಶ್ವರ ಖಂಡ್ರೆ, ಈಗ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿ ಗ್ರಾ.ಪಂ.ಗೆ ಸೇರಿದ ಕೆರೆ ಒತ್ತುವರಿ ತೆರವಿಗೆ ಆದೇಶಿಸಿದ್ದು, ಇಂದು ತುಮಕೂರು, ಹಿರೇಹಳ್ಳಿಯ ಒತ್ತುವರಿ ಪ್ರದೇಶದ ತೆರವು ಕಾರ್ಯಾಚರಣೆ ನಡೆಯುತ್ತಿದೆ.

ರಾಜ್ಯದಲ್ಲಿ ಗ್ರಾ.ಪಂ.ಗೆ ಸೇರಿದ 32504 ಕೆರೆಗಳ ಪೈಕಿ ತೆರವಾಗದೆ ಉಳಿದಿರುವ 4828 ಕೆರೆಗಳ 11671 ಎಕರೆ ಒತ್ತುವರಿಯನ್ನು ನಿಯಮಾನುಸಾರ ತೆರವು ಮಾಡುವಂತೆ ಇತ್ತೀಚೆಗಷ್ಟೇ ಸಚಿವರು ಆದೇಶ ನೀಡಿದ್ದರು. ಬಳಿಕ ಸೆ.5ರಂದು ತುಮಕೂರು ಗ್ರಾಮಾಂತರ ಜಿಲ್ಲೆ ಊರ್ಡಿಗೆರೆ ಹೋಬಳಿ ಹಿರೇಹಳ್ಳಿ ಕೆರೆ ಪ್ರದೇಶಕ್ಕೆ ಖುದ್ದು ಭೇಟಿ ನೀಡಿ ಒತ್ತುವರಿ ತೆರವಿಗೆ ಸೂಚನೆ ನೀಡಿದ್ದರು. ಸಚಿವರ ಭೇಟಿ ಹಾಗೂ ಆದೇಶದ ಬೆನ್ನಲ್ಲೆ ಪಂಚಾಯತಿ ಅಧಿಕಾರಿಗಳು, ಸರ್ವೆ ನಂ.118ರಲ್ಲಿರುವ 17.32 ಎಕರೆ ಕೆರೆ ಅಂಗಳದ ಪೈಕಿ ಒತ್ತುವರಿಯಾಗಿರುವ ಪ್ರದೇಶವನ್ನು ಭೂಮಾಪಕರ ನೆರವಿನಿಂದ ಗುರುತಿಸಿ, ತೆರವು ಮಾಡಿ, ಗಡಿ ಗುರುತಿಸಿ ಹದ್ದುಬಸ್ತು ಮಾಡಲು ಮುಂದಾಗಿದ್ದಾರೆ.

ಜೆಸಿಬಿ ವಾಹನಗಳ ಜೊತೆ ಕಾರ್ಯಾಚರಣೆಗಿಳಿದಿರುವ ಪಂಚಾಯತಿ ಅಧಿಕಾರಿ, ಸಿಬ್ಬಂದಿ, ಅಕ್ರಮವಾಗಿ ಕೆರೆಗೆ ಮಣ್ಣು ತುಂಬಿ ಒತ್ತುವರಿ ಮಾಡಿದ್ದ ಸುಮಾರು 28 ಗುಂಟೆ ತೆರವು ಮಾಡಿಸಿದ್ದು, ಕೆರೆಯ ಹೆಚ್ಚಿನ ಭೂಮಿ ಸಾರ್ವಜನಿಕ ರಸ್ತೆಯಾಗಿ ಬಳಕೆಯಾಗುತ್ತಿರುವುದನ್ನು ಗುರುತಿಸಿದ್ದಾರೆ. ಕೆರೆಯ ಉಳಿಕೆ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿಯಲಿದೆ. ಸಂಪೂರ್ಣ 17.32 ಎಕರೆ ಕೆರೆಗೂ ಗಡಿ ಗುರುತು ಮಾಡುವ ಕಾರ್ಯ ಪ್ರಗತಿಯಲ್ಲಿದ್ದು, ಇದು ರಾಜ್ಯದ ಇತರೆ ಕೆರೆ ಒತ್ತುವರಿದಾರರಿಗೂ ಎಚ್ಚರಿಕೆಯ ಗಂಟೆಯಾಗಿದೆ.

## ಸಹಕಾರ ಧುರೀಣ ಕೆ.ಎನ್. ರಾಜಣ್ಣ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನಾಗಿ ಮಾಡಿ: ಲೋಕೇಶ್ ಪಾಳೆಗಾರ್

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ, :- ಸಹಕಾರ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿದ್ದು, ಸಹಕಾರ ಕ್ಷೇತ್ರಕ್ಕಾಗಿ ದುಡಿದಿರುವ ಸಹಕಾರ ರತ್ನ, ವಾಲ್ಮೀಕಿ ನಾಯಕ ಸಮಾಜದ ಪ್ರಶ್ನಾತೀತ ನಾಯಕ, ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರನ್ನು ರಾಜ್ಯ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನಾಗಿ ನೇಮಿಸಿ ವಾಲ್ಮೀಕಿ ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಪಾವಗಡ ತಾಲೂಕು ವಾಲ್ಮೀಕಿ ಜಾಗೃತಿ ವೇದಿಕೆ ಅಧ್ಯಕ್ಷ ಲೋಕೇಶ್ ಪಾಳೆಗಾರ್ ಒತ್ತಾಯಿಸಿದ್ದಾರೆ.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಯಾವುದೇ ತಪ್ಪು ಮಾಡದಿದ್ದರೂ ಕಾಂಗ್ರೆಸ್ ಸರ್ಕಾರ ಕೆ.ಎನ್. ರಾಜಣ್ಣ ಅವರನ್ನು ಸಹಕಾರ ಸಚಿವ ಸ್ಥಾನದಿಂದ ಕೈಬಿಟ್ಟು ವಾಲ್ಮೀಕಿ ಸಮಾಜಕ್ಕೆ ಅನ್ಯಾಯ ಮಾಡಿದೆ. ಮಾಡಿದ ಅನ್ಯಾಯವನ್ನು ಸರಿಪಡಿಸಿಕೊಳ್ಳಲು ಈ ಬಾರಿ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನಾಗಿ ಮಾಡಬೇಕು. ಒಂದು ವೇಳೆ ಮಾಡದಿದ್ದರೆ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ನಷ್ಟ ಅನುಭವಿಸಲಿದೆ. ವಾಲ್ಮೀಕಿ ಸಮಾಜ ತಕ್ಕ ಉತ್ತರ ನೀಡಲಿದೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

## ನವಿಲುಗಳ ಸರಣಿ ನಿಗೂಢ ಸಾವು: ಗ್ರಾಮಸ್ಥರಲ್ಲಿ ಹಕ್ಕಿಜ್ವರದ ಆತಂಕ

ಸೂರ್ಯಪ್ರಗತಿನ್ಯೂಸ್.ಕಾಂ



ಮಾಚೇನಹಳ್ಳಿ, ರಾಯಸಂದ್ರದಲ್ಲಿ ತುರುವೇಕೆರೆ: ತಾಲ್ಲೂಕಿನ ದಂಡಿನಶಿವರ ಹೋಬಳಿ ವ್ಯಾಪ್ತಿಯ ಮಾಚೇನಹಳ್ಳಿ ಹಾಗೂ ರಾಯಸಂದ್ರ ಗ್ರಾಮಗಳ ಕೃಷಿ ಜಮೀನುಗಳಲ್ಲಿ ರಾಷ್ಟ್ರಪಕ್ಷಿ ನವಿಲುಗಳು ನಿಗೂಢವಾಗಿ ಸರಣಿ ಸಾವನ್ನಪ್ಪುತ್ತಿದ್ದು, ಸ್ಥಳೀಯರಲ್ಲಿ ಹಕ್ಕಿಜ್ವರದ (ಏವಿಯನ್ ಇನ್‌ಫ್ಲುಯೆನ್ಸ) ಭೀತಿ ತೀವ್ರಗೊಂಡಿದೆ.

ಕಳೆದ ಮೂರ್ನಾಲ್ಕು ದಿನಗಳಿಂದ ಗ್ರಾಮದ ಅಡಿಕೆ ತೋಟಗಳು, ರಾಗಿ ಹೊಲ ಹಾಗೂ ಪೊದೆಗಳ ಬಳಿ ನವಿಲುಗಳು ನಿತ್ರಾಣಗೊಂಡು ಕುಸಿದುಬಿದ್ದು ಪ್ರಾಣಬಿಡುತ್ತಿವೆ. ನಿನ್ನೆ ಒಂದೇ ದಿನ ನಾಲ್ಕಕ್ಕೂ ಹೆಚ್ಚು ನವಿಲುಗಳ ಕಳೇಬರಗಳು ಪತ್ತೆಯಾಗಿದ್ದು, ಸಾವಿನ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ.

ಬೆಳೆಗಳಿಗೆ ಸಿಂಪಡಿಸಿದ ಕೀಟನಾಶಕಯುಕ್ತ ಆಹಾರ ಅಥವಾ ಕಲುಷಿತ ನೀರು ಸೇವಿಸಿ ನವಿಲುಗಳು ಸಾವನ್ನಪ್ಪಿರಬಹುದೇ ಎಂಬ ಶಂಕೆ ಒಂದೆಡೆಯಾದರೆ, ಹಕ್ಕಿಜ್ವರದ ಸೋಂಕು ತಗುಲಿರಬಹುದೇ ಎಂಬ ಅನುಮಾನ ಸಾರ್ವಜನಿಕರಲ್ಲಿ ದಟ್ಟವಾಗಿದೆ. ನವಿಲುಗಳ ಸರಣಿ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಸುತ್ತಮುತ್ತಲಿನ ಹಳ್ಳಿಗಳ ಕುಕ್ಕುಟೋದ್ಯಮಿಗಳು ಹಾಗೂ ಕೋಳಿ ಸಾಕಾಣಿಕೆದಾರರು ಕಂಗಾಲಾಗಿದ್ದಾರೆ. ಒಂದು ವೇಳೆ ಇದು ಹಕ್ಕಿಜ್ವರವೇ ಆಗಿದ್ದರೆ ಸಾಕುಕೋಳಿಗಳ ಜತೆಗೆ ಮನುಷ್ಯರಿಗೂ ವ್ಯಾಪಿಸುವ ಅಪಾಯವಿದೆ ಎಂಬ ಆತಂಕ ಗ್ರಾಮಸ್ಥರನ್ನು ಕಾಡುತ್ತಿದೆ ಸ್ಥಳೀಯರು ನೀಡಿದ ಮಾಹಿತಿ ಮೇರೆಗೆ ಅರಣ್ಯ ಇಲಾಖೆ ಹಾಗೂ ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೇಲ್ನೋಟಕ್ಕೆ ಇದು ವಿಷಾಹಾರ ಅಥವಾ ಕೀಟನಾಶಕ ಸೇವನೆಯಿಂದ ಸಂಭವಿಸಿರುವ ಸಾವಿನಂತೆ ಕಂಡುಬರುತ್ತಿದ್ದರೂ, ಮರಣೋತ್ತರ ಪರೀಕ್ಷೆ ಹಾಗೂ ಪ್ರಯೋಗಾಲಯದ ವರದಿ ಬಂದ ನಂತರವೇ ನಿಖರ ಕಾರಣ ಹೊರಬರಬೇಕಿದೆ. ಗ್ರಾಮಸ್ಥರಲ್ಲಿ ಮನೆಮಾಡಿರುವ ಆತಂಕವನ್ನು ದೂರಮಾಡಲು ಅರಣ್ಯ ಇಲಾಖೆ ಕೂಡಲೇ ಸೂಕ್ತ ತನಿಖೆ ನಡೆಸಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ 100ರ ಸಂಭ್ರಮ:

## ಸೆ.10ರಂದು "ಶತಕದ ಪಥ, ಪ್ರಗತಿಯ ರಥ" ವಿಶೇಷ ಕಾರ್ಯಕ್ರಮ




ಸೂರ್ಯಪ್ರಗತಿನ್ಯೂಸ್.ಕಾಂ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಿಕ್ಕೆ ಬಂದು ಇಂದು (ಸೆಪ್ಟೆಂಬರ್ 10) 100 ದಿನಗಳನ್ನ ಪೂರೈಸಲಿದೆ. ಹೀಗಾಗು ಯಶಸ್ವಿ 100 ದಿನಗಳನ್ನು ಸಂಭ್ರಮಿಸಲು ಸರ್ಕಾರ ವಿಶೇಷ ಕಾರ್ಯಕ್ರಮವೊಂದನ್ನು ಆಯೋಜಿಸಿದೆ.

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಆಡಳಿತವು 100 ದಿನಗಳನ್ನು ಯಶಸ್ವಿಯಾಗಿ ಪೂರೈಸಿದ ಹಿನ್ನೆಲೆಯಲ್ಲಿ, "ದೃಢ ಕರ್ನಾಟಕದ ಸಂಕಲ್ಪ ಶತಕದ ಪಥ, ಪ್ರಗತಿಯ ರಥ" ಎಂಬ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ನಾಳೆ ಅಂದರೆ ಸೆಪ್ಟೆಂಬರ್ 10 ರ ಗುರುವಾರ ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ "ಶತಕದ ಪಥ, ಪ್ರಗತಿಯ ರಥ" ವಿಶೇಷ ಕಾರ್ಯಕ್ರಮ ನಡೆಯಲಿದೆ. ಇನ್ನು ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ ನೆರವೇರಿಸುತ್ತಿರುವುದು ವಿಶೇಷ.

### ಫಲಾನುಭವಿಗಳೊಂದಿಗೆ ಸಿಎಂ ಸಂವಾದ

ಸರ್ಕಾರದ ಪ್ರಮುಖ ಐದು ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ ಯೋಜನೆ, ಗೃಹಲಕ್ಷ್ಮಿ ಯೋಜನೆ, ಶಕ್ತಿ ಯೋಜನೆ, ಯುವನಿಧಿ ಯೋಜನೆ, ಗೃಹಜ್ಯೋತಿ ಯೋಜನೆ ಹಾಗೂ ವಿವಿಧ ಕ್ಷೇತ್ರದ ಕಾರ್ಮಿಕರನ್ನು ಒಳಗೊಂಡಂತೆ, ಸಮಾಜದ ವಿವಿಧ ವರ್ಗಗಳ ಫಲಾನುಭವಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಅವರೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನೇರವಾಗಿ ಸಂವಾದ ನಡೆಸಲಿದ್ದಾರೆ.

ಕಾರ್ಯಕ್ರಮದಲ್ಲಿ ಕೃಷಿಕರು, ಆಟೋ ಚಾಲಕರು, ಹಮಾಲಿಗಳು, ಗಿಗ್ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಮತ್ತು ಪೌರಕಾರ್ಮಿಕರು ಭಾಗವಹಿಸಲಿದ್ದು, ರಾಜ್ಯ ಸರ್ಕಾರದ ಜನಪರ ಯೋಜನೆಗಳು ಜನರ ಜೀವನದಲ್ಲಿ ತಂದಿರುವ ಬದಲಾವಣೆಗಳು ಮತ್ತು ಅಭಿವೃದ್ಧಿಯ ಮುಂದಿನ ಹಾದಿಯ ಕುರಿತು ಚರ್ಚೆ ನಡೆಯಲಿದೆ.

ಇನ್ನು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಮತ್ತು ಕ್ರೀಡಾ ಇಲಾಖೆ ಸಚಿವರಾದ ಡಾ. ಜಿ. ಪರಮೇಶ್ವರ್, ರಾಜ್ಯ ಸಂಪುಟದ ಎಲ್ಲಾ ಸಚಿವರು, ಶಾಸಕರು ಮತ್ತು ರಾಜ್ಯ ಸಭಾ ಸದಸ್ಯರು, ಲೋಕಸಭಾ ಸದಸ್ಯರು ಹಾಗೂ ವಿಧಾನಪರಿಷತ್ತಿನ ಸದಸ್ಯರು, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ ಸರ್ಕಾರದ ಎಲ್ಲಾ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

## ಸಣ್ ಸುದ್ದಿ

## ಗೌರಿ–ಗಣೇಶ ಹಬ್ಬಕ್ಕೆ ಡಿ.ಜೆ ಸಿಸ್ಟಂ– ಪಟಾಕಿ ಬಳಸುವಂತಿಲ್ಲ ತುಮಕೂರು ಜಿಲ್ಲಾ ಪೊಲೀಸ್ ಇಲಾಖೆ ಖಡಕ್ ವಾರ್ನಿಂಗ್

ಸೂರ್ಯಪ್ರಗತಿನ್ಯೂಸ್.ಕಾಂ






ತುಮಕೂರು ಜಿಲ್ಲೆಯ ಸಮಸ್ತ ನಾಗರೀಕರಿಗೆ ಗೌರಿ–ಗಣೇಶ ಹಬ್ಬದ ಶುಭಾಷಯಗಳನ್ನು ಜಿಲ್ಲಾ ಪೊಲೀಸ್ ವತಿಯಿಂದ ಕೋರುತ್ತಾ, ಹಬ್ಬದ ಸಂಧರ್ಭದಲ್ಲಿ ಸಾರ್ವಜನಿಕರ ಸುರಕ್ಷತೆ, ಅನುಕೂಲತೆ ಮತ್ತು ಹಿತ ದೃಷ್ಟಿಯಿಂದ ಸುರಕ್ಷಿತವಾಗಿ ಆಚರಿಸಲು ತಿಳಿಸಲಾಗಿದೆ.

ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮಾಡಿರುವ ಸ್ಥಳ ಹಾಗೂ ಮೆರವಣಿಗೆ ಸಮಯದಲ್ಲಿ ಡಿ.ಜೆ ಸಿಸ್ಟಂ/ಹೆಚ್ಚಿನ ಶಬ್ದ ಹೊರಸೂಸುವ ಧ್ವನಿ ವರ್ಧಕಗಳನ್ನು ಬಳಸಿದಲ್ಲಿ ಗರ್ಭಿಣಿಯರಿಗೆ, ನವಜಾತ ಶಿಶುಗಳಿಗೆ, ವಯೋವೃದ್ದರಿಗೆ, ಬಾಣಂತಿಯವರಿಗೆ, ಹೃದಯ ಸಂಬಂಧಿ ಖಾಯಿಲೆ ಇರುವವರಿಗೆ, ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಪಡೆಯುತ್ತಿರುವ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟು ಮಾಡುವುದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನಾ ಸ್ಥಳ ಹಾಗೂ ಮೆರವಣಿಗೆ ಸಂದರ್ಭದಲ್ಲಿ ಯಾವುದೇ ಡಿ.ಜೆ ಸಿಸ್ಟಮ್ ಬಳಕೆ/ಹೆಚ್ಚಿನ ಶಬ್ದ ಹೊರಸೂಸುವ ಧ್ವನಿ ವರ್ಧಕಗಳನ್ನು ಬಳಸುವುದನ್ನು ತುಮಕೂರು ಜಿಲ್ಲಾದ್ಯಂತ ನಿಷೇಧಿಸಲಾಗಿದೆ.

ಅದೇ ರೀತಿ ಪಟಾಕಿಗಳ ಬಳಕೆಯಿಂದ ಆಕಸ್ಮಿಕ ಅಗ್ನಿ ಅವಘಡಗಳು ಸಂಭವಿಸಿ ಪ್ರಾಣ ಹಾನಿ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗೆ ಧಕ್ಕೆ ಉಂಟಾಗುವ ಹೆಚ್ಚಿನ ಸಾಧ್ಯತೆ ಇರುತ್ತದೆ ಹಾಗೂ ಪಟಾಕಿಯ ಹೆಚ್ಚಿನ ಶಬ್ದದಿಂದ ವಯೋವೃದ್ದರು, ಗರ್ಭಿಣಿಯರು ಮತ್ತು ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಂಭವ ಇರುವುದರಿಂದ ಪ್ರತಿಷ್ಠಾಪನಾ ಸ್ಥಳ ಹಾಗೂ ಮೆರವಣಿಗೆ ಸಂದರ್ಭದಲ್ಲಿ ಪಟಾಕಿಗಳನ್ನು ಸಿಡಿಸುವುದು, ಹೊತ್ತಿಸುವುದು, ಎಸೆಯುವುದು ಅಥವಾ ಬಳಸುವುದನ್ನು ತುಮಕೂರು ಜಿಲ್ಲಾದ್ಯಂತ ನಿಷೇಧಿಸಲಾಗಿದೆ.

ಹಬ್ಬದ ಪ್ರಯುಕ್ತ ಪೊಲೀಸ್ ಇಲಾಖೆ ವತಿಯಿಂದ ನೀಡಲಾದ ನಿರ್ದೇಶನಗಳನ್ನು ತಪ್ಪದೇ ಪಾಲಿಸತಕ್ಕದ್ದು. ತುರ್ತು ಸಂದರ್ಭಗಳಲ್ಲಿ 112 ಕರೆ ಮಾಡಿ ಸಹಾಯ ಪಡೆದುಕೊಳ್ಳುವುದು. ನಿಮ್ಮ ರಕ್ಷಣೆ ನಮ್ಮ ಹೊಣೆ ಎಲ್ಲಾ ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸುವುದು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಿಸಲು ಜಿಲ್ಲಾಧಿಕಾರಿ ಮನವಿ

ಸೂರ್ಯಪ್ರಗತಿನ್ಯೂಸ್.ಕಾಂ




ತುಮಕೂರು: ಸ್ವರ್ಣಗೌರಿ ಹಾಗೂ ಗಣೇಶ ಚತುರ್ಥಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಸಾರ್ವಜನಿಕರು ಗಣೇಶ ಚತುರ್ಥಿ ಹಬ್ಬದ ಆಚರಣೆ ನಂತರ ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ಕೆರೆ/ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೆ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ ಹಾಗೂ ಸಾರ್ವಜನಿಕ ಆರೋಗ್ಯಕ್ಕೂ ಧಕ್ಕೆ ಉಂಟಾಗುತ್ತದೆ.

ಪಿಓಪಿ ಮತ್ತು ಬಣ್ಣ ಲೇಪಿತ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆಯನ್ವಯ ಪಿಓಪಿ ವಿಗ್ರಹಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸ್ ನೀಡಲಾಗುವುದಿಲ್ಲ. ಲೈಸೆನ್ಸ್ ಪಡೆಯದೇ ಅನಧಿಕೃತವಾಗಿ ತಯಾರಿ/ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳ ಮೇಲೆ ಕಾನೂನು ಕ್ರಮವನ್ನು ಜರುಗಿಸಲಾಗುವುದು. ಅಧಿಸೂಚನೆಯನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್/ಬಣ್ಣ ಲೇಪಿತ ವಿಗ್ರಹಗಳನ್ನು ಯಾವುದೇ ನದಿ/ಕಾಲುವೆ/ಬಾವಿಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ಗೌರಿ ಹಾಗೂ ಗಣೇಶ ಹಬ್ಬದ ಸಂದರ್ಭದಲ್ಲಿ ರಾಸಾಯನಿಕ ಬಣ್ಣಗಳಿಂದ ಮಾಡಿದ ಮೂರ್ತಿಗಳ ಬದಲಾಗಿ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಪೂಜಿಸಿದ ನಂತರ ಸಾಮೂಹಿಕವಾಗಿ ಗುರುತಿಸಿರುವ ಸ್ಥಳಗಳಲ್ಲಿ ಮಾತ್ರ ವಿಸರ್ಜಿಸಬೇಕು. ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಮೊಬೈಲ್ ಟ್ಯಾಂಕ್‌ಗಳಲ್ಲಿ/ಕಲ್ಯಾಣಿಗಳ ಪಕ್ಕದಲ್ಲಿ ಹಸಿ ಕಸ (ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ, ಇತ್ಯಾದಿ) ಪ್ರತ್ಯೇಕಿಸಿ ವಿಲೇವಾರಿ ಮಾಡಬೇಕು. ಸಾರ್ವಜನಿಕವಾಗಿ ಇಡಲಾಗುವ ಗಣೇಶ ವಿಗ್ರಹಗಳನ್ನು ಪ್ರತಿ ಸಮಿತಿಯವರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆ ಮತ್ತು ಪೋಲೀಸ್ ಇಲಾಖೆಯಿಂದ ನಿಬಂಧನೆಗೊಳಪಟ್ಟು ಅನುಮತಿಯನ್ನು ಪಡೆದ ನಂತರವೇ ಸ್ಥಾಪಿಸಬೇಕು. ರಾತ್ರಿ 10 ರಿಂದ ಬೆಳಿಗ್ಗೆ 6 ಗಂಟೆಯ ಅವಧಿಯಲ್ಲಿ ಧ್ವನಿವರ್ಧಕಗಳ ಬಳಕೆ ನಿಷೇಧಿಸಲಾಗಿದೆ.

ಕರ್ನಾಟಕ ಸರ್ಕಾರದಿಂದ ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್(ಖಗಿಕ) ವಸ್ತುಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದ್ದು, ಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಲೂನ್, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್, ಪ್ಲಾಸ್ಟಿಕ್ ಐಸ್ ಕ್ರೀಮ್ ಸ್ಟಿಕ್, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೆರೀನ್(ಥರ್ಮೋಕೋಲ್)ಗಳನ್ನು ಬಳಸುವಂತಿಲ್ಲ.

ಎಲ್ಲಾ ರೀತಿಯ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್ (including Compostable, Bio-degradable and non-woven sacks irrespective of size and thickness) ಪ್ಲಾಸ್ಟಿಕ್ ಧ್ವಜ, ಅಂಟಿಕೊಳ್ಳುವ ಫಿಲ್ಮ್, ಎಲ್ಲಾ ದಪ್ಪದ ಡೈನಿಂಗ್ ಟೇಬಲ್‌ನಲ್ಲಿ ಹರಡಲು ಬಳಸುವ ಪ್ಲಾಸ್ಟಿಕ್ ಹಾಳೆ, ಸ್ಟ್ರಾ, ಪ್ಲಾಸ್ಟಿಕ್ ಮೈಕ್ರೋ ಮಣಿಗಳಿಂದ ಮಾಡಿದ ವಸ್ತು, ಪ್ಲಾಸ್ಟಿಕ್ ಪ್ಲೇಟ್, ಪ್ಲಾಸ್ಟಿಕ್ ಕಪ್ ಮತ್ತು ಲೋಟ, ಫೋರ್ಕ್, ಪ್ಲಾಸ್ಟಿಕ್ ಚಮಚ, ಪ್ಲಾಸ್ಟಿಕ್ ಚಾಕು, ಪ್ಲಾಸ್ಟಿಕ್ ಟ್ರೇ, ಸ್ವೀಟ್ ಬಾಕ್ಸ್ / ಆಮಂತ್ರಣ ಪತ್ರ / ಸಿಗರೇಟ್ ಪ್ಯಾಕೆಟ್‌ಗಳ ಸುತ್ತ ಸುತ್ತುವ ಪದರ ಅಥವಾ ಪ್ಯಾಕಿಂಗ್ ಫಿಲ್ಮ್ ಮತ್ತು ಪ್ಲಾಸ್ಟಿಕ್ ಸ್ಟಿಕರ್‌ಗಳು ನಿಷೇಧಿತವಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಎಲ್ಲಾ ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಂತೆ ನಿರ್ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಡಿಕೆಶಿ ಸರ್ಕಾರ 100 ಡೇಸ್ ಕಂಪ್ಲೀಟ್

### ಬಡವರಿಗೆ 15 ಲಕ್ಷ ಉಚಿತ ಸೈಟ್ ಹಂಚಿಕೆಗೆ ಸಂಪುಟ ಅಸ್ತು!




ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸರ್ಕಾರ ಅಧಿಕಾರಕ್ಕೆ ಬಂದು ನಾಳೆ 100 ದಿನ ಪೂರೈಸುತ್ತಿರುವ ಹಿನ್ನೆಲೆಯಲಿ ರಾಜ್ಯ ಸರ್ಕಾರದಿಂದ ಬಡವರಿಗೆ ಭರ್ಜರಿ ಯೋಜನೆಗಳನ್ನು ಘೋಷಿಸಲು ಮುಂದಾಗಿದೆ.

ಪ್ರತಿ ಜಿಲ್ಲೆಯಲ್ಲಿ ನಿವೇಶನ ರಹಿತರಿಗೆ 50 ಸಾವಿರ ಉಚಿತ ನಿವೇಶನ ಹಂಚಲು ಸರ್ಕಾರ ಮುಂದಾಗಿದೆ. ಈ ಸಂಬಂಧ ಇಂದಿನ ಕ್ಯಾಬಿನೆಟ್ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.ರಾಜ್ಯಾದ್ಯಂತ ಒಟ್ಟು 15 ಲಕ್ಷ ನಿವೇಶನ ಹಂಚಿಕೆಯ ಗುರಿ ಹೊಂದಲಾಗಿದ್ದು, ಒಟ್ಟು 3 ಹಂತದಲ್ಲಿ ನಿವೇಶನಗಳನ್ನ ಹಂಚಲು ಸರ್ಕಾರ ನಿರ್ಧರಿಸಿದೆ. ಮೊದಲ ಹಂತದ 5 ಲಕ್ಷ ನಿವೇಶನ ಹಂಚಿಕೆ ಮಾಡಲು ಸರ್ಕಾರ ನಿರ್ಧರಿಸಿದೆ. ವಿಧಾನಸೌಧದ ಬ್ಯಾಕ್ವೆಂಟ್ ಹಾಲ್‌ನಲ್ಲಿ ನಾಳೆ ಸಂಭ್ರಮದ ಕಾರ್ಯಕ್ರಮ ನಡೆಯಲಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಈ ವೇಳೆ, ಸುಮಾರು 80 ಜನ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಂವಾದ ನಡೆಸಲಿದ್ದಾರೆ.ಇದೇ ವೇಳೆ, ಕೃಷಿ, ಶಿಕ್ಷಣ, ಆರೋಗ್ಯ ಸೇರಿದಂತೆ ಕೆಲವು ಆದ್ಯತೆಯ ಕ್ಷೇತ್ರಗಳಿಗೆ ನಾಲ್ಕೈದು ಭರ್ಜರಿ ಹೊಸ ಘೋಷಣೆ ಮಾಡುವ ನಿರೀಕ್ಷೆ ಇದೆ.

### ಆಡಳಿತದಲ್ಲಿ ವಿಳಂಬ ತಪ್ಪಿಸಲು 'ಪ್ರಜಾ ಸೇವಾ ಇಲಾಖೆ'

ಆಡಳಿತವನ್ನು ಜನಸ್ನೇಹಿಯಾಗಿಸುವುದು ಹಾಗೂ ಅಧಿಕಾರಶಾಹಿಯ ವಿಳಂಬವನ್ನು ಕಡಿಮೆ ಮಾಡುವ ಉದ್ದೇಶದಿಂದ ಶಿವಕುಮಾರ್ ಸರ್ಕಾರ 'ಪ್ರಜಾ ಸೇವಾ ಇಲಾಖೆ'ಯನ್ನು ಆರಂಭಿಸಿದೆ.

ಈ ಪ್ರತ್ಯೇಕ ಇಲಾಖೆಯ ರಚನೆಯಿಂದ ನಾಗರಿಕ ಸೇವೆಯನ್ನು ಸರ್ಕಾರದ ಪ್ರಮುಖ ಕಾರ್ಯವನ್ನಾಗಿ ರೂಪಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ದೂರುಗಳ ಪರಿಹಾರ ವ್ಯವಸ್ಥೆಯನ್ನು ಕಡತ ವಿಲೇವಾರಿಯಾಗಿದೆಯೇ ಎಂಬುದರ ಆಧಾರದ ಮೇಲೆ ಅಲ್ಲದೆ, ನಾಗರಿಕರ ಸಮಸ್ಯೆ ನಿಜವಾಗಿಯೂ ಪರಿಹಾರವಾಗಿದೆಯೇ ಎಂಬುದರ ಆಧಾರದ ಮೇಲೆ ಮೌಲ್ಯಮಾಪನ ಮಾಡಬೇಕು ಎಂದು ಸರ್ಕಾರ ಹೇಳಿದೆ.

ಈ ಹಿಂದಿನ ವ್ಯವಸ್ಥೆಯಲ್ಲಿ ಸಮಸ್ಯೆ ಪರಿಹಾರವಾಗದಿದ್ದರೂ ಕಡತ ವಿಲೇವಾರಿ ಮಾಡಲು ಅವಕಾಶವಿತ್ತು. ಅಲ್ಲದೆ, ದೂರು ತಿರಸ್ಕರಿಸಿದ ಸಂದರ್ಭದಲ್ಲಿ ಕಾರಣಗಳನ್ನು ನೀಡುವ ವ್ಯವಸ್ಥೆಯೂ ಇರಲಿಲ್ಲ ಎಂದು ಮೂಲಗಳು ತಿಳಿಸಿವೆ.

## ತುಮಕೂರು ದಸರಾ ಮಹೋತ್ಸವ: ಕಲಾ ತಂಡಗಳಿಂದ ಅರ್ಜಿ ಆಹ್ವಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲಾಡಳಿತದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವು ಅಕ್ಟೋಬರ್ 11 ರಿಂದ 21ರವರೆಗೆ 11 ದಿನಗಳ ಕಾಲ "ತುಮಕೂರು ದಸರಾ ಮಹೋತ್ಸವ–2026" ಅನ್ನು ಸರ್ಕಾರದ ಕಾರ್ಯಕ್ರಮವನ್ನಾಗಿ ಆಚರಣೆ ಮಾಡಲಾಗುತ್ತಿದ್ದು, ಈ ಸಂಬಂಧ ನಾಡಹಬ್ಬದ ಆಚರಣೆಯ ವಿವಿಧ ವೇದಿಕೆ ಕಾರ್ಯಕ್ರಮ ಹಾಗೂ ಮೆರವಣಿಗೆ ಕಾರ್ಯಕ್ರಮಗಳಲ್ಲಿ ಸಾಂಸ್ಕೃತಿಕ ಪ್ರದರ್ಶನ ನೀಡಲು ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರದರ್ಶನ ಕಲೆಗಳಲ್ಲಿ ಉತ್ತಮ ವೇಷಭೂಷಣ ಹಾಗೂ ವಾದ್ಯ ಪರಿಕರಗಳನ್ನು ಒಳಗೊಂಡ ತಂಡಕ್ಕೆ ಆದ್ಯತೆ ನೀಡಲಾಗುವುದು. ಈ ಕುರಿತು ಅರ್ಜಿಯೊಂದಿಗೆ ತಂಡದ ಉತ್ತಮ ಛಾಯಾಚಿತ್ರ ಹಾಗೂ ವೇದಿಕೆ ಕಲಾತಂಡಗಳಲ್ಲಿ ಈ ಹಿಂದಿನ ದಿನಗಳಲ್ಲಿ ವಿವಿಧ ವೇದಿಕೆಗಳಲ್ಲಿ ನೀಡಿರುವ ಕಾರ್ಯಕ್ರಮಗಳ ಆಯ್ದು ಛಾಯಾಚಿತ್ರಗಳನ್ನು ಲಗತ್ತಿಸಬೇಕು. ತಂಡದ ಆಯ್ಕೆಯು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತುಮಕೂರು ದಸರಾ ಆಚರಣಾ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ನಿರ್ಣಯಕ್ಕೆ ಬದ್ದವಾಗಿರುತ್ತದೆ.

ಅರ್ಜಿಯನ್ನು ಸ್ವಬರಹದಡಿ ತಂಡದ ಎಲ್ಲಾ ಸದಸ್ಯರ ಹೆಸರು / ವಿವರಗಳೊಂದಿಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತುಮಕೂರು(0816-2275204) ಕಚೇರಿಗೆ ಸೆಪ್ಟೆಂಬರ್ 19ರೊಳಗಾಗಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ಸತೀಶ್ ಜಾರಕಿಹೊಳಿ ಅವರ ಬಾಮೈದ ಅವರ ಮನೆ ಮೇಲೆ ಜಾರಿ ನಿರ್ದೇಶನಾಲಯ (ED) ದಾಳಿ



ಬೆಳಗಾವಿ: ಲೋಕೋಪಯೋಗಿ ಇಲಾಖೆ (PWD) ಸಚಿವ ಸತೀಶ್ ಜಾರಕಿಹೊಳಿ ಅವರ ಬಾಮೈದ, ಅಬಕಾರಿ ಇಲಾಖೆಯ ಜಂಟಿ ಆಯುಕ್ತ ವೈ. ಮಂಜುನಾಥ್ ಅವರ ಆಸ್ತಿಗಳ ಮೇಲೆ ಜಾರಿ ನಿರ್ದೇಶನಾಲಯ (ED) ಹಲವು ಕಡೆ ದಾಳಿ ನಡೆಸಿದ ಕೆಲವೇ ವಾರಗಳ ಬಳಿಕ, ಇದೀಗ ಸ್ವತಃ ಸತೀಶ್ ಜಾರಕಿಹೊಳಿಗೆ ಸಂಬಂಧಿಸಿದ ಸುಮಾರು 18 ಸ್ಥಳಗಳ ಮೇಲೆ ಇಡಿ ಅಧಿಕಾರಿಗಳು ಬುಧವಾರ ಬೆಳಗ್ಗೆ ಶೋಧ ನಡೆಸಿದ್ದಾರೆ.

ಬೆಂಗಳೂರಿನ ಡಾಲರ್ಸ್ ಕಾಲನಿಯಲ್ಲಿರುವ ಸಚಿವರ ನಿವಾಸ, ಸರ್ಕಾರಿ ವಸತಿ ಗೃಹಗಳು ಹಾಗೂ ಬೆಳಗಾವಿ ಮತ್ತು ಗೋಕಾಕ್‌ನಲ್ಲಿರುವ ಆಸ್ತಿಗಳ ಮೇಲೂ ಶೋಧ ನಡೆಸಲಾಗಿದೆ. ಬಾರ್ ಲೈಸೆನ್ಸ್‌ಗಳ ವಿತರಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳು ಸೇರಿದಂತೆ ವಿವಿಧ ವಿಚಾರಗಳ ಕುರಿತು ನಡೆಯುತ್ತಿರುವ ತನಿಖೆಯ ಭಾಗವಾಗಿ ಈ ದಾಳಿ ನಡೆದಿದೆ ಎನ್ನಲಾಗಿದೆ.

ಮುಂಜಾನೆಯಿಂದ ಆರಂಭವಾದ ಶೋಧ ಕಾರ್ಯಾಚರಣೆಯನ್ನು ಸಚಿವರ ಪುತ್ರಿ ಹಾಗೂ ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳು ಮತ್ತು ಕುಟುಂಬಕ್ಕೆ ಸಂಬಂಧಿಸಿದ ಇತರ ಸ್ಥಳಗಳಲ್ಲೂ ನಡೆಸಲಾಗಿದೆ. ಜಾರಕಿಹೊಳಿ ಅವರ ಆಪ್ತ ಮೂಲಗಳ ಪ್ರಕಾರ, ಮಹಾರಾಷ್ಟ್ರದಲ್ಲಿರುವ ಕೆಲವು ಸ್ಥಳಗಳಲ್ಲೂ ಶೋಧ ಕಾರ್ಯಾಚರಣೆ ನಡೆಸಲಾಗಿದೆ.

ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಇಡಿ ನಡೆಸುತ್ತಿರುವ ತನಿಖೆಯ ಮುಂದುವರಿದ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿದುಬಂದಿದೆ. 18 ಬಾರ್ ಲೈಸೆನ್ಸ್‌ಗಳ ವಿತರಣೆಯಲ್ಲಿ ನಡೆದಿರುವ ಎನ್ನಲಾದ ಅಕ್ರಮಗಳು ಮತ್ತು ಅಕ್ರಮ ಹಣದ ವಹಿವಾಟಿನ ಬಗ್ಗೆಯೂ ತನಿಖೆ ನಡೆಯುತ್ತಿದೆ.

# ರಾಮನಗರ ಜಿಲ್ಲಾಸ್ಪತ್ರೆಯ ಕರ್ಮಕಾಂಡ ಹಣ ಕೊಡದಿದ್ದರೆ ರೋಗಿಗಳಿಗಿಲ್ಲ ಚಿಕಿತ್ಸೆ!; ವೈದ್ಯನ ಲಂಚಾವತಾರ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ಜಿಲ್ಲಾಸ್ಪತ್ರೆಯಲ್ಲಿನ ಕರ್ಮ ಕಾಂಡವೊಂದು ಬಯಲಾಗಿದೆ. ಇಲ್ಲಿನ ಸರ್ಕಾರಿ ವೈದ್ಯ ಹಣ ಕೊಡದಿದ್ದರೆ ಆಪರೇಷನ್ ಮಾಡುವುದಿಲ್ಲ. ರೋಗಿಯ ಹೊಟ್ಟೆಯಿಂದ ರಕ್ತ ಸುರಿಯುತ್ತಿದ್ದರು ಕರುಣೆ ತೋರಿಲ್ಲ. ಇನ್ನು ಲೋಕಾಯುಕ್ತ ಅಧಿಕಾರಿಗಳ ಎಚ್ಚರಿಕೆಗೂ ಡೋಂಟ್‌ಕೇರ್ ಎನ್ನುತ್ತಿರುವ ವೈದ್ಯ ವಿರುದ್ಧ ರೋಗಿಗಳು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ಜಿಲ್ಲಾಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಸಿಗಬೇಕಾದ ಉಚಿತ ಆರೋಗ್ಯ ಸೇವೆ ಲಂಚದ ಜಾಲಕ್ಕೆ ಸಿಲುಕಿದೆ. ಆಸ್ಪತ್ರೆಯ ಯುರಾಲಜಿ ವಿಭಾಗದ ವೈದ್ಯ ಡಾ. ವಿಶ್ವನಾಥ್ ಆರ್. ಹಣ ನೀಡದಿದ್ದರೆ ಶಸ್ತ್ರಚಿಕಿತ್ಸೆಯನ್ನೇ ಮಾಡದೆ ರೋಗಿಗಳನ್ನು ವಾಪಸ್ ಕಳುಹಿಸುತ್ತಿದ್ದು, 'ವೈದ್ಯೋ ನಾರಾಯಣ ಹರಿ' ಎಂಬ ಮಾತಿಗೆ ಕಳಂಕ ತಂದಿದ್ದಾರೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.



ಕಿಡ್ನಿ ಸ್ಟೋನ್ ಆಪರೇಷನ್‌ಗೆ ತಲಾ 30 ಸಾವಿರ ರೂ. ಬೇಡಿಕೆ

ಕಳೆದ ಮೂರು ವರ್ಷಗಳಿಂದ ಈ ಜಿಲ್ಲಾಸ್ಪತ್ರೆಯಲ್ಲಿ ಏಕೈಕ ಯುರಾಲಜಿಸ್ಟ್ ಆಗಿ ಕಾರ್ಯನಿರ್ವಹಿಸುತ್ತಿರುವ ಡಾ. ವಿಶ್ವನಾಥ್, ಕಿಡ್ನಿ ಸ್ಟೋನ್ ಶಸ್ತ್ರಚಿಕಿತ್ಸೆಗೆ ಬರುವ ರೋಗಿಗಳಿಂದ ತಲಾ 30 ಸಾವಿರ ರೂ ಲಂಚಕ್ಕೆ ಬೇಡಿಕೆ ಇಡುತ್ತಿದ್ದಾರೆ. ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸಾ ಪರಿಕರಗಳಿಲ್ಲ, ಹೀಗಾಗಿ ಹೊರಗಡೆಯಿಂದ ತರಿಸಿ ಆಪರೇಷನ್ ಮಾಡಬೇಕೆಂದು ನೆಪವೊಡ್ಡಿ ಹಣ ವಸೂಲಿಗೆ ಇಳಿದಿದ್ದಾರೆ.

ಈ ಹಿಂದೆ ಇವರ ಲಂಚಾವತಾರದ ಬಗ್ಗೆ ಲೋಕಾಯುಕ್ತ ಎಸ್ಪಿ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು ಎಚ್ಚರಿಕೆ ನೀಡಿದ್ದರೂ, ಜಿಲ್ಲಾಸ್ಪತ್ರೆಯ ಸರ್ಜನ್ ಮತ್ತು ಲೋಕಾಯುಕ್ತರ ಮಾತಿಗೂ ಕ್ಯಾರೆ ಎನ್ನದೆ ದಂಧೆ ಮುಂದುವರಿಸಿದ್ದಾರೆ.

ರಕ್ತ ಸುರಿಯುತ್ತಿದ್ದರೂ ಕರುಣೆ ತೋರದ ವೈದ್ಯ ಡಾ ವಿಶ್ವನಾಥ್

ಕಿಡ್ನಿ ಸ್ಟೋನ್ ಸಮಸ್ಯೆಯಿಂದ ಚಿಕಿತ್ಸೆಗೆ ಬಂದಿದ್ದ ಕುರುಬರಹಳ್ಳಿ ಗ್ರಾಮದ ರಂಗೇಗೌಡ ಎಂಬ ರೋಗಿಯ ಬಳಿ 30 ಸಾವಿರ ರೂ. ಬೇಡಿಕೆ ಇಡಲಾಗಿತ್ತು. ಶಸ್ತ್ರಚಿಕಿತ್ಸೆಯ ಸಮಯದಲ್ಲಿ ಹೊರಗಿನಿಂದ 7 ಸಾವಿರ ರೂ ಮೌಲ್ಯದ ಔಷಧಗಳನ್ನು ತರಿಸಿಕೊಂಡಿದ್ದ ವೈದ್ಯ, ಕೇಳಿದಷ್ಟು ಹಣ ಕೊಡಲಿಲ್ಲ ಎಂಬ ಕಾರಣಕ್ಕೆ ಶಸ್ತ್ರಚಿಕಿತ್ಸೆಯ ನಂತರ ರೋಗಿಯ ಹೊಟ್ಟೆಯಿಂದ ರಕ್ತ ಸುರಿಯುತ್ತಿದ್ದರೂ ಕನಿಷ್ಠ ಬ್ಯಾಂಡೇಜ್ ಕೂಡ ಮಾಡದೆ ಅಮಾನವೀಯ ಮೆರೆದಿದ್ದಾರೆ.

ಲಂಚ ನೀಡದ್ದಕ್ಕೆ ಆಪರೇಷನ್ ಥಿಯೇಟರ್‌ನಿಂದಲೇ ವಾಪಸ್ ಮತ್ತೊಂದೆಡೆ, ಜಾಲಮಂಗಲ ಗ್ರಾಮದ ಲೀಲಾವತಿ ಎಂಬ ರೋಗಿಯ ಬಳಿಯೂ 30 ಸಾವಿರ ರೂ ಬೇಡಿಕೆ ಇಡಲಾಗಿತ್ತು. ಚಿಕಿತ್ಸೆಗೂ ಮುನ್ನವೇ ರೋಗಿಯಿಂದ 3 ಸಾವಿರ ರೂ ಪಡೆದಿದ್ದ ವೈದ್ಯ, ಉಳಿದ 30 ಸಾವಿರ ರೂ ನೀಡಲಿಲ್ಲ ಎಂಬ ಕಾರಣಕ್ಕೆ ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಆಪರೇಷನ್ ಥಿಯೇಟರ್‌ನಲ್ಲೇ ಕೂರಿಸಿ, ಕೊನೆಗೆ ಶಸ್ತ್ರಚಿಕಿತ್ಸೆ ಮಾಡದೆಯೇ ವಾಪಸ್ ಕಳುಹಿಸಿದ್ದಾರೆ.

ವೈದ್ಯ ಡಾ ವಿಶ್ವನಾಥ್ ವಿರುದ್ಧ ಸಾರ್ವಜನಿಕರ ಆಕ್ರೋಶ ಇನ್ನು, ಹಣಕ್ಕಾಗಿ ರೋಗಿಗಳ ಜೀವದ ಜೊತೆ ಚೆಲ್ಲಾಟವಾಡುತ್ತಿರುವ ವೈದ್ಯ ಡಾ. ವಿಶ್ವನಾಥ್ ವಿರುದ್ಧ ರೋಗಿಗಳು, ಅವರ ಸಂಬಂಧಿಕರು ಹಾಗೂ ಸ್ಥಳೀಯ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿ ಸಿಡಿದೆದ್ದಿದ್ದಾರೆ.

## ಸಣ್ ಸುದ್ದಿ

### ಡಾ. ಯೋಗೀಶ್‌ಗೆ 'ವಿದ್ಯಾಭೂಷಣ' ರಾಜ್ಯ ಪ್ರಶಸ್ತಿ!



ಜ್ಞಾನ ಚೈತನ್ಯ ಚಾರಿಟೇಬಲ್ ಟ್ರಸ್ಟ್ ವತಿಯಿಂದ ತುಮಕೂರಿನ ಡಾ. ಯೋಗೀಶ್ ಡಿ.ಪಿ. ಅವರಿಗೆ 'ವಿದ್ಯಾಭೂಷಣ ರಾಜ್ಯ ಪ್ರಶಸ್ತಿ' ನೀಡಿ ಗೌರವಿಸಲಾಯಿತು. ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ನ ಶ್ರೀ ಕೃಷ್ಣರಾಜ ಸಭಾಂಗಣದಲ್ಲಿ ನಡೆದ ಉದ್ಘಾಟನಾ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಶಿಕ್ಷಣ ಕ್ಷೇತ್ರದಲ್ಲಿ ಅವರು ನಿರಂತರವಾಗಿ ಸಲ್ಲಿಸುತ್ತಿರುವ ಗಣನೀಯ ಸೇವೆ ಹಾಗೂ ಸಾಧನೆಯನ್ನು ಗುರುತಿಸಿ ಈ ಗೌರವ ನೀಡಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ನೀಡುತ್ತಿರುವ ಕೊಡುಗೆಯನ್ನು ಟ್ರಸ್ಟ್ ವಿಶೇಷವಾಗಿ ಪರಿಗಣಿಸಿದೆ.



ರಾಮನಗರ : ಅರ್ಚಕರಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಸೆಪ್ಟೆಂಬರ್ 17 ರ ಗುರುವಾರ ಬೆಳಿಗ್ಗೆ 10-00 ಗಂಟೆಗೆ ಸಂಘದ ಆವರಣದಲ್ಲಿ ಸಂಘದ ವಿಶೇಷಾಧಿಕಾರಿ ದೊಡ್ಡಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ. ಬಿಡಿಸಿಸಿ ಬ್ಯಾಂಕ್ ನಿರ್ದೇಶಕರಾದ ವೈ.ಹೆಚ್. ಮಂಜು ಬಿಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ಬಿ.ಪಿ. ನವೀನ್‌ಕುಮಾರ್ ಭಾಗವಹಿಸಲಿದ್ದಾರೆ ಸಂಘದ ಸದಸ್ಯರು ಮಹಾಸಭೆಯಲ್ಲಿ ಭಾಗವಹಿಸಬೇಕೆಂದು ಸಂಘದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎ.ಸಿ. ಶಿವಶಂಕರ ತಿಳಿಸಿದ್ದಾರೆ

# ರೇಷ್ಮೆ ಸಹಕಾರ ಸಂಘದ ಅಧ್ಯಕ್ಷರಾಗಿ ಸಲಾವುದ್ದೀನ್ ಆಯ್ಕೆ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ರೇಷ್ಮೆನೂಲು ಬಿಚ್ಚುವವರ ಮತ್ತು ನೇಕಾರರ ಕೈಗಾರಿಕಾ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ನಡೆದ ಚುನಾವಣೆಯಲ್ಲಿ ಮಹಮದ್ ಸಲಾವುದ್ದೀನ್ ಜಯಗಳಿಸಿದರೆ ಉಪಾಧ್ಯಕ್ಷರಾಗಿ ವಿ.ಶ್ರೀನಿವಾಸ್ ಅವಿರೋಧವಾಗಿ ಆಯ್ಕೆಯಾದರು.

ನಗರದ ರೇಷ್ಮೆನೂಲು ಬಿಚ್ಚುವವರ ಮತ್ತು ನೇಕಾರರ ಕೈಗಾರಿಕಾ ಸಹಕಾರ ಸಂಘದ ಕಚೇರಿಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಮೊಹಮದ್ ಸಲಾವುದ್ದೀನ್ ಹಾಗೂ ಯಾಸಿನ್ ಪಾಷ ಉಮೇದುವಾರಿಕೆ ಸಲ್ಲಿಸಿದ್ದರು. ಉಪಾಧ್ಯಕ್ಷ ಸ್ಥಾನಕ್ಕೆ ವಿ.ಶ್ರೀನಿವಾಸ್ ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸಿದ ಕಾರಣ ಅವರು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡರು. ಬಳಿಕ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮಹಮದ್ ಸಲಾವುದ್ದೀನ್ 7 ಮತಗಳನ್ನು ಪಡೆದು ಜಯಗಳಿಸಿದರೆ, ಎದುರಾಳಿ ಅಭ್ಯರ್ಥಿ ಯಾಸಿನ್ ಪಾಷ 3 ಮತಗಳನ್ನು ಪಡೆದು ಸೋಲು ಕಂಡರು. ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆಯ ಮಂಜುನಾಥ್ ಕರ್ತವ್ಯ ನಿರ್ವಹಿಸಿದರು.



ಈ ವೇಳೆ ನೂತನ ಅಧ್ಯಕ್ಷ ಮಹಮದ್ ಸಲಾವುದ್ದೀನ್ ಮಾತನಾಡಿ ಅಧ್ಯಕ್ಷನನ್ನಾಗಿ ನನ್ನನ್ನು ಆಯ್ಕೆ ಮಾಡಲು ಕಾರಣರಾದ ಎಲ್ಲಾ ನಿರ್ದೇಶಕರು ಹಾಗೂ ಮುಖಂಡರಿಗೂ ಧನ್ಯವಾದ ಸಲ್ಲಿಸುತ್ತೇನೆ. ಪರ್ವೀಜ್ ಪಾಷ ಅವರು ನಮಗೆ ಸೇವೆ ಮಾಡಲು ಒಳ್ಳೆಯ ನಿರ್ದೇಶಕರ ತಂಡ ಕಟ್ಟಿಕೊಟ್ಟಿದ್ದಾರೆ. ಎಲ್ಲರ ಸಹಕಾರದಲ್ಲಿ ಮಾದರಿ ಸೊಸೈಟಿ ನಿರ್ಮಿಸಲು ಪ್ರಾಮಾಣಿಕ ಪ್ರಯತ್ನದ ಜೊತೆಗೆ ನನ್ನ ಅವಧಿಯಲ್ಲಿ ರೇಷ್ಮೆ ಬಿಚ್ಚಣಿಕೆದಾರರಿಗೆ ನ್ಯಾಯ ಒದಗಿಸಲು ಶ್ರಮಿಸುವುದಾಗಿ ಶ್ರಮಿಸುತ್ತೇನೆ. ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ 10 ಲಕ್ಷ ಅನುದಾನ ಸಹ ನೀಡಿದ್ದಾರೆ. ರೀಲರ್ಸ್ ಗಳಿಗೆ ಸೊಸೈಟಿ ವತಿಯಿಂದ ಸವಲತ್ತು ಕೊಡುವ ಜೊತೆಗೆ ಉತ್ತಮ ವಹಿವಾಟು ನಡೆಸಲು ಎಲ್ಲ ರೀತಿಯ ನೆರವು ನೀಡಲಾಗುವುದು ಎಂದರು.

ರಾಮನಗರ ಸಿಲ್ಕ್ ರೀಲರ್ಸ್ ಅಸೋಸಿಯೇಷನ್ ಅಧ್ಯಕ್ಷ ಪರ್ವೀಜ್ ಪಾಷ ಮಾತನಾಡಿ, ನೂತನ ಅಧ್ಯಕ್ಷರು, ಉಪಾಧ್ಯಕ್ಷರು ಒಳಗೊಂಡಂತೆ ನಿರ್ದೇಶಕರು ಸೊಸೈಟಿ ಪ್ರಗತಿಗೆ ಶ್ರಮಿಸುವ ವಿಶ್ವಾಸವಿದೆ. ರೀಲರ್ಸ್ ಗಳಿಗೆ ವ್ಯಾಪಾರ ಮಾಡಲು ನೆರವು, ಆರೋಗ್ಯ ಸಂಜೀವಿನಿ ಕಾರ್ಡ್ ಹಾಗೂ ಮಕ್ಕಳ ಶೈಕ್ಷಣಿಕ ವ್ಯವಸ್ಥೆಗೆ ಪೂರಕ ಯೋಜನೆ ರೂಪಿಸಲಾಗುವುದು. ರೀಲರ್ಸ್ ಗಳಿಗೆ ಶೇ.10ರಷ್ಟು ಬಡ್ಡಿ ದರವಿದ್ದು ಅದನ್ನು ಶೇ.5ರಷ್ಟು ಬಡ್ಡಿ ಸಾಲಕ್ಕೆ ಕಡಿತ ಮಾಡಲು ಚಿಂತಿಸಲಾಗಿದೆ. ರೀಲರ್ಸ್ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ನೆರವು, ಕೆ ಎಸ್ ಐ ಸಿ ಮತ್ತು ಕೆ ಎಸ್ ಎಂ ಬಿ ಮೂಲಕ ಸೊಸೈಟಿ ವಹಿವಾಟು ನಡೆಸಲು ಎಲ್ಲ ನಿರ್ದೇಶಕರ ಪರವಾಗಿ ಶ್ರಮಿಸುವುದಾಗಿ ತಿಳಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಸಂಘದ 10 ನಿರ್ದೇಶಕರಾದ ಮಹಮ್ಮದ್ ಸಲಾವುದೀನ್, ನಯಾಜ್ ಉಲ್ಲಾಖಾನ್, ಫೈರೋಜ್ ಖಾನ್ , ಮಹಮದ್ ಷಫೀ ಅಹಮದ್, ಯಾಸೀನ್ ಪಾಷ, ನಾಸಿರ್ವುದ್ದೀನ್, ಶ್ರೀನಿವಾಸ್, ಅಸ್ಮತ್ ಪಾಷ (ಅಜ್ಜು), ನೂರ್ ಸಾದಿಕ್ ಮತ್ತು ಆಯಿಷಾಖಾನಂ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ರಮೇಶ್, ರಾಮನಗರ ಸಿಲ್ಕ್ ರೀಲರ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಮೌಸೀನ್ ಅಲಿಖಾನ್, ಉಪಾಧ್ಯಕ್ಷ ಸೈಯದ್ ಶಫೀವುಲ್ಲಾ ಮುಖಂಡರಾದ ಹಾಜಿ ಹಬೀಬ್ ಉಲ್ಲಾ, ಅಬ್ಬಾಸ್ ಶರೀಫ್, ಮಹಮ್ಮದ್ ನಿಜಾಮ್ ಹುಸೇನ್, ಮಹಮ್ಮದ್ ತನ್ಜಿಮ್, ಆರೀಫ್ ಉಲ್ಲಾ ಸೇರಿದಂತೆ ಹಲವರಿದ್ದರು.

# ಸಾಮಾಜಿಕ ಸೇವೆ ಮೂಲಕ ಸಮಾಜದ ಅಭಿವೃದ್ಧಿಗೆ ದುಡಿಯುತ್ತಿರುವ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಸಾಮಾಜಿಕ ಸೇವೆ ಮೂಲಕ ಸಮಾಜದ ಅಭಿವೃದ್ಧಿಗೆ ದುಡಿಯುತ್ತಿರುವ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಕೊಡುಗೆ ಸಮಾಜಕ್ಕೆ ಪೂರಕವಾಗಿದೆ ಎಂದು ವಕೀಲ ಶೇಷಾದ್ರಿ ಅಯ್ಯರ್ ತಿಳಿಸಿದರು.

ರಾಮನಗರದ ಮಂಡೀ ಪೇಟೆ ಬನ್ನಿ ಮಹಾಂಕಾಳಿ ಅಮ್ಮನವರ ಮತ್ತು ಛತ್ರದ ಬೀದಿಯ ಶಂಕರ ದೇವಾಲಯ ಕಟ್ಟಡ ಸಹಾಯಾರ್ಥವಾಗಿ ಬುಧವಾರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಅನುದಾನದ ಮಂಜೂರಾತಿ ಪತ್ರಗಳನ್ನು ಸಂಬಂಧಿಸಿದ ದೇವಸ್ಥಾನ ಕಮಿಟಿಯವರಿಗೆ ವಿತರಿಸಿ ಮಾತನಾಡಿದರು.

ಧರ್ಮಸ್ಥಳ ಸಂಸ್ಥೆ ಜಿಲ್ಲೆಯಲ್ಲಿ ಕೇವಲ ಹಣಕಾಸಿನ ವಹಿವಾಟಿಗೆ ಸಂಘಗಳನ್ನು ಮಾಡಿ ಅಷ್ಟಕ್ಕೇ ಸೀಮಿತವಾಗದೆ ಗ್ರಾಮೀಣ ಮತ್ತು ನಗರ ಪ್ರದೇಶದ ದೇವಾಲಯಗಳು, ಸಮುದಾಯ ಭವನಗಳು, ಆಸ್ಪತ್ರೆ, ಶಾಲೆಗಳು, ಮಠ ಮಾನ್ಯಗಳು, ಪ್ರಮುಖವಾಗಿ ರೈತರಿಗೆ ನೆರವಾಗುವ ಹಾಲಿನ ಡೈರಿಗಳ ಕಟ್ಟಡಕ್ಕೆ ಧನ ಸಹಾಯ ಜೊತೆಗೆ ಜನಮಂಗಳ ಕಾರ್ಯಕ್ರಮದಡಿ ಬಡವರಿಗೆ ಹಲವು ಸವಲತ್ತುಗಳನ್ನು ನೀಡಿ ಸಮಾಜದ ಅಭಿವೃದ್ಧಿಯಲ್ಲಿ ಸಂಸ್ಥೆ ಪ್ರಮುಖವಾಗಿದೆ ಎಂದು ತಿಳಿಸಿದರು.

ತಾಪಂ ಮಾಜಿ ಅಧ್ಯಕ್ಷ ಕೇತೋಹಳ್ಳಿ ಕೆ.ಎಸ್. ಶಂಕರಯ್ಯ ಮಾತನಾಡಿ ಧರ್ಮಸ್ಥಳದಲ್ಲಿ ದೇವಾಲಯ ಪೂಜೆ, ಅನ್ನದಾನಕ್ಕಷ್ಟೇ ಸೀಮಿತಗೊಳ್ಳದೆ ನಾಡಿನ ಅಭಿವೃದ್ಧಿಗೂ ಮುಂದಡಿ ಇಟ್ಟಿರುವ ಶ್ರೀಗಳು ತಮ್ಮ ಸಾಮಾಜಿಕ ಸೇವೆ ಮೂಲಕ ಸಮಾಜದ ಅಭಿವೃದ್ಧಿಗೆ ಕಟಿಬದ್ದರಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮುಖಾಂತರ ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# RKVY ಯೋಜನೆಯಡಿ ರೈತರಿಗೆ ನೆರವು : ಅರ್ಜಿ ಆಹ್ವಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಜಿಲ್ಲೆಯ ಆಸಕ್ತ ತೋಟಗಾರಿಕೆ ರೈತರಿಗೆ ಹಾಗೂ ಉದ್ದಿಮೆದಾರರಿಗೆ ನೆರವು ನೀಡಲು ಅರ್ಜಿ ಅಹ್ವಾನಿಸಲಾಗಿದೆ.

ತೋಟಗಾರಿಕೆಯಲ್ಲಿನ ಕೊಯ್ಲೋತ್ತರ ನಿರ್ವಹಣಾ ಚಟುವಟಿಕೆಗಳಿಗೆ ಪ್ರೋತ್ಸಾಹ ಕಾರ್ಯಕ್ರಮದಡಿ ಕಡಿಮೆ ವೆಚ್ಚದ ಹಣ್ಣು ಮಾಗಿಸುವ ಘಟಕ ನಿರ್ಮಾಣಕ್ಕೆ ಘಟಕ ವೆಚ್ಚ 6500 ರೂ.ಗಳ ಶೇ.50ರಂತೆ 3250 ರೂ.ಸಹಾಯಧನ ನೀಡಲಾಗುವುದು. ತೋಟಗಾರಿಕೆ ಬೆಳೆಗಳಲ್ಲಿ ಗುಣಮಟ್ಟದ ಉತ್ಪಾದನೆಗೆ ವಿಶೇಷ ಉತ್ತೇಜನ ಕಾರ್ಯಕ್ರಮದಡಿ ಸ್ವಯಂ ಚಾಲಿತ ಹವಮಾನ ಮುನ್ಸೂಚನಾ ಘಟಕಗಳಿಗೆ(ಂಣಂಠಿಚಿಣಜಜ ತಿಜಚಿಣhಜಡಿ ಣಚಿಣiಠಿ) ಘಟಕ ವೆಚ್ಚ 60,000 ರೂ.ಗಳಲ್ಲಿ ಶೇ.50ರಂತೆ 30,000 ರೂ.ಗಳ ಸಹಾಯಧನ ನೀಡಲಾಗುವುದು.

ಆಸಕ್ತ ರೈತರುಹಾಗೂ ಉದ್ದಿಮೆದಾರರು ಭರ್ತಿ ಮಾಡಿದ ಅರ್ಜಿಯೊಂದಿಗೆ ಪಹಣಿ, ಆಧಾರ್ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಪ.ಜಾತಿ/ಪ.ಪಂಗಡದ ರೈತರು ಜಾತಿ ದೃಢೀಕರಣ ಪತ್ರವನ್ನು ಲಗತ್ತಿಸಿ ಆಯಾ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ(ಜಿ.ಪಂ) ಅಥವಾ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ತುಮಕೂರು ದೂ.ವಾ.ಸಂ.-8095042988, ಗುಬ್ಬಿ-9535781963, ಶಿರಾ-9844042356, ಕುಣಿಗಲ್-8884984999, ತಿಪಟೂರು-7022225169, ಚಿಕ್ಕನಾಯಕನಹಳ್ಳಿ-9686056705, ಮಧುಗಿರಿ-9611789551, ತುರುವೇಕೆರೆ-8088688759, ಕೊರಟಗೆರೆ-9448001644 ಹಾಗೂ ಪಾವಗಡ-9845268382ನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶೋತ್ಸವಕ್ಕೆ 500 ಕ್ಯಾಮೆರಾ ಕಣ್ಗಾವಲು ಶಾಂತಿಯುತವಾಗಿ ಹಬ್ಬ ಆಚರಿಸಲು ಸೂಚನೆ



ತುಮಕೂರು: 'ಗಣೇಶ ಮೂರ್ತಿ ಪ್ರತಿಷ್ಠಾಪನೆಯಿಂದ ಹಿಡಿದು ವಿಸರ್ಜನೆ ವರೆಗೆ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಪೊಲೀಸ್ ಇಲಾಖೆ ಬಿಗಿ ಕ್ರಮಗಳನ್ನು ತೆಗೆದುಕೊಳ್ಳಲಿದೆ. ನಗರದಲ್ಲಿ ಸುಮಾರು 500ಕ್ಕೂ ಹೆಚ್ಚು ಕ್ಯಾಮೆರಾಗಳ ಮೂಲಕ ಪ್ರತಿಯೊಂದು ಬಡಾವಣೆಯ ಚಲನವಲನಗಳನ್ನು ಪೊಲೀಸ್ ಇಲಾಖೆ ಗಮನಿಸಲಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಹೇಳಿದರು.

ನಗರದ ಕುಂಚಿಟಿಗರ ಸಭಾ ಭವನದಲ್ಲಿ ಮಂಗಳವಾರ ನಡೆದ ತುಮಕೂರು ತಾಲ್ಲೂಕು ಗಣಪತಿ ಪ್ರತಿಷ್ಠಾಪನಾ ಸಮಿತಿಗಳ ಪಧಾಧಿಕಾರಿಗಳ ಶಾಂತಿ ಸಭೆಯಲ್ಲಿ ಮಾತನಾಡಿದರು.

'ಗಣಪತಿ ಪ್ರತಿಷ್ಠಾಪನೆಗೆ ಬೇಕಾದ ಎಲ್ಲಾ ಅನುಮತಿಗಳನ್ನು ಏಕಗವಾಕ್ಷಿ ಮೂಲಕ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಸ್ಥಳೀಯ ಸಂಸ್ಥೆಯಿಂದ ಪರವಾನಗಿ ಪಡೆದುಕೊಂಡು, ಅನುಮತಿ ನೀಡಿದ ಪ್ರದೇಶದಲ್ಲಷ್ಟೇ ಫ್ಲೆಕ್ಸ್, ಬ್ಯಾನರ್ ಕಟ್ಟಬೇಕು. ಯಾವುದೇ ಧರ್ಮ, ಸಮುದಾಯವನ್ನು ಹೀಯಾಳಿಸುವ ಪದಗಳನ್ನು ಮುದ್ರಿಸುವಂತಿಲ್ಲ' ಎಂದು ಸೂಚಿಸಿದರು.

'ಗಣಪತಿ ಪ್ರತಿಷ್ಠಾಪನೆ, ಉತ್ಸವ ಮತ್ತು ವಿಜರ್ಸನೆ ಸಂದರ್ಭದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಗಣಪತಿ ಪ್ರತಿಷ್ಠಾಪನೆ ಮಾಡಿರುವ ಸ್ಥಳದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸುವುದು ಕಡ್ಡಾಯ' ಎಂದರು.

'ಡಿಜೆ ಬಳಕೆಗೆ ಸುಪ್ರೀಂ ಕೋರ್ಟ್ ನಿರ್ಬಂಧವಿದೆ. ಸಾರ್ವಜನಿಕರಿಗೆ ತೊಂದರೆ ಆಗದಂತೆ ಶಾಂತಿಯುತ ಮೆರವಣಿಗೆ ನಡೆಸಬೇಕು. ಗಣಪತಿ ವಿಸರ್ಜನೆಯ ದಿನಾಂಕ ಮತ್ತು ರೂಟ್ ಮ್ಯಾಪ್ ಮೊದಲೇ ತಿಳಿಸಿದರೆ, ಸೂಕ್ತ ಬಂದೋಬಸ್ತ್ ಒದಗಿಸಲಾಗುವುದು. ಸಾಮೂಹಿಕ ಗಣಪತಿ ವಿಸರ್ಜನೆಗೆ ಮುಂದಾದರೆ ಅದಕ್ಕೂ ಪೊಲೀಸ್ ಇಲಾಖೆ ಸಹಕರಿಸಲಿದೆ' ಎಂದರು.

- ಗೋಪಾಲ್, ಎಎಸ್‌ಪಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೊ ವೈರಲ್ ಮಾಡುವ ಮುನ್ನ, ಸೂಕ್ಷ್ಮತೆ ಅರ್ಥ ಮಾಡಿಕೊಳ್ಳಬೇಕು. ಪೊಲೀಸ್ ಇಲಾಖೆ 24/7 ನಿಮ್ಮೊಂದಿಗೆ ಕೆಲಸ ಮಾಡಲು ಸಿದ್ಧವಿದೆ. ಸೂಕ್ಷ್ಮ ಸ್ಥಳಗಳಲ್ಲಿ ಮೆರವಣಿಗೆ ಸಾಗುವಾಗ ಪ್ರಚೋದನೆಗೆ ಒಳಗಾಗುವುದು ಬೇಡ

ತುಮಕೂರು ನಗರ ಡಿವೈಎಸ್ಪಿ ಚಂದ್ರಶೇಖರ್, ಗ್ರಾಮಾಂತರ ಡಿವೈಎಸ್ಪಿ ಪುಟ್ಟೇಗೌಡ ಹಾಗೂ ಪೊಲೀಸ್ ಸಿಬ್ಬಂದಿ, ಗಣಪತಿ ಪ್ರತಿಷ್ಠಾಪನಾ ಸಮಿತಿಗಳ ಆಯೋಜಕರು ಭಾಗವಹಿಸಿದ್ದರು.

# ಮಾನಸಿಕ ಆರೋಗ್ಯ ಕಾಪಾಡೋಣ, ಆತ್ಮಹತ್ಯೆ ತಡೆಯೋಣ

## ಪ್ರತಿ ವರ್ಷ ಸೆಪ್ಟೆಂಬರ್ 10 ರಂದು "ವಿಶ್ವ ಆತ್ಮಹತ್ಯೆ ತಡೆ" ದಿನಾಚರಣೆ

ಸೂರ್ಯಪ್ರಗತಿನ್ಯೂಸ್.ಕಾಂ

ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ 2026 ಧ್ಯೇಯವಾಕ್ಯ "ಮಾತನಾಡಿ... ಆಲಿಸಿ..., ಬದುಕಿಗೆ ಬೆಂಬಲ ನೀಡಿ" ಎಂಬ ಸಂದೇಶದೊಂದಿಗೆ "ವಿಶ್ವ ಆತ್ಮಹತ್ಯೆ ತಡೆ" ದಿನವನ್ನು ಆಚರಿಸಲಾಗುತ್ತದೆ. ಜನರಲ್ಲಿ ಆತ್ಮಹತ್ಯೆಯ ಬಗ್ಗೆ ಅರಿವು ಮೂಡಿಸುವುದು ಈ ದಿನದ ಉದ್ದೇಶ. ಆತ್ಮಹತ್ಯೆ ಒಂದು ಮಾನಸಿಕ ಸಮಸ್ಯೆ. ಹೇಗೆ ತಲೆನೋವು, ಹೊಟ್ಟೆ ನೋವು ಒಂದು ಕಾಯಿಲೆಯ ಚಿಹ್ನೆಯೋ ಹಾಗೆಯೇ ಆತ್ಮಹತ್ಯೆ ಕೂಡ ಮಾನಸಿಕ ಕಾಯಿಲೆಯ ಚಿಹ್ನೆ. ಒಂದು ವ್ಯಕ್ತಿಗೆ ಆತ್ಮಹತ್ಯೆ ಮಾಡಿಕೊಳ್ಳ ಬೇಕೆಂಬ ಯೋಚನೆ ಬರುವುದರ ಅರ್ಥ ಅವನು ದೌಬಲ್ಯ ಅಥವಾ ಹೇಡಿ ಎಂದಲ್ಲ. ಇದು ಒಂದು ಕಾಯಿಲೆಯ ಲಕ್ಷಣ ಎಂದು ತಿಳಿಯಬೇಕು. ಇಂತ ವ್ಯಕ್ತಿಯಲ್ಲಿ ಮಾನಸಿಕ ಸಮಸ್ಯೆ ಇರುತ್ತದೆ.

ಸಾಮಾನ್ಯವಾಗಿ ಆತ್ಮಹತ್ಯೆ ಯೋಚನೆ ಬರುವವರಲ್ಲಿ ಖಿನ್ನತೆ, ಆತಂಕ, ಓಸಿಡಿ ಅಥವಾ ಬೈಪೋಲಾರ್ ನಂತಹ ಮಾನಸಿಕ ಕಾಯಿಲೆ ಇರುತ್ತದೆ. ಇದು ಒಂದು ಗಂಭೀರವಾದ ಮಾನಸಿಕ ಆರೋಗ್ಯ ಸಮಸ್ಯೆಯಾಗಿದ್ದು ಸೂಕ್ತ ಸಮಯದಲ್ಲಿ ಗುರುತಿಸಿ ಚಿಕಿತ್ಸೆ ನೀಡುವುದು ಉಚಿತ.







ಆತ್ಮಹತ್ಯೆ ಒಂದು ವ್ಯಕ್ತಿಯ ಸಮಸ್ಯೆ ಮಾತ್ರವಲ್ಲ, ಅದು ಕುಟುಂಬ ಮತ್ತು ಸಮಾಜದ ಮೇಲೂ ಪರಿಣಾಮ ಬೀರುವ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿದೆ. ಪ್ರತಿ ವರ್ಷ ವಿಶ್ವದಾದ್ಯಂತ ಲಕ್ಷಾಂತರ ಜನರು ಆತ್ಮಹತ್ಯೆಯಿಂದ ತಮ್ಮ ಜೀವ ಕಳೆದುಕೊಳ್ಳುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಮಕ್ಕಳಲ್ಲಿ ಮುಖ್ಯವಾಗಿ ಹದಿ-ಹರೆಯವರಲ್ಲಿ ಕೂಡ ಖಿನ್ನತೆ, ಆತ್ಮಹತ್ಯೆ ಹೆಚ್ಚಾಗುತ್ತಿದೆ. ಆತ್ಮಹತ್ಯೆಯ ಹಿಂದೆ ಒಂದೇ ಒಂದು ಕಾರಣ ಇರುವುದಿಲ್ಲ. ಖಿನ್ನತೆ, ಆತಂಕ, ಆರ್ಥಿಕ ಬಿಕ್ಕಟ್ಟು ಸಂಬಂಧಗಳಲ್ಲಿನ ಸಮಸ್ಯೆಗಳು, ಉದ್ಯೋಗ ಅಥವಾ ವಿದ್ಯಾಭ್ಯಾಸದ ಒತ್ತಡ, ದೈಹಿಕ ಕಾಯಿಲೆ ಹೀಗೆ ಜೀವನದ ತೀವ್ರ ಸಮಸ್ಯೆಗಳು ವ್ಯಕ್ತಿಯನ್ನು ಮಾನಸಿಕ ಒತ್ತಡಕ್ಕೆ ತಳಬಹುದು.

**ಹಾಗಾದರೆ ಆತ್ಮಹತ್ಯೆಯನ್ನು ತಡೆಯಬಹುದೇ? ಖಂಡಿತ ಹೌದು.!**

ಸಮಾಲೋಚನೆ, ಮನೋಚಿಕಿತ್ಸೆ ಮತ್ತು ಅಗತ್ಯವಿದ್ದಲ್ಲಿ ಔಷಧ ಚಿಕಿತ್ಸೆಯ ಮೂಲಕ ಖಿನ್ನತೆ ಸೇರಿದಂತೆ ಅನೇಕ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಗುಣಪಡಿಸಬಹುದು. ಆದರೆ ಚಿಕಿತ್ಸೆ ಪಡೆಯುವ ದಾರಿಯಲ್ಲಿ ಸಾಮಾಜಿಕ ಕಳಂಕ ದೊಡ್ಡ ಅಡ್ಡಿಯಾಗಿದೆ. "ಜನ ಏನು ಅಂದುಕೊಳ್ಳುತ್ತಾರೆ" "ನನ್ನನ್ನು ಹುಚ್ಚನೆಂದು" ಕರೆಯುತ್ತಾರೆ ಎಂಬ ಭಯ. ಜೊತೆಗೆ ಮಾನಸಿಕ ಚಿಕಿತ್ಸೆಯ ಬಗ್ಗೆ ಜನರಲ್ಲಿರುವ ತಪ್ಪು ಅಭಿಪ್ರಾಯ, "ಈ ಮಾತ್ರೆಗಳನ್ನು ನಾನು ಜೀವನ ಜೀವನಪರ್ಯಂತ ತೆಗೆದುಕೊಳ್ಳಬೇಕು", "ಮಾತ್ರೆಯಿಂದ ದಪ್ಪ ಆಗುತ್ತೇನೆ, ಕಿಡ್ನಿ-ಲಿವರ್ ಡ್ಯಾಮೇಜ್ ಆಗುತ್ತದೆ. ಹೀಗೆ ಹಲವಾರು ತಪ್ಪು-ವಿಚಾರಗಳಿಂದ ಜನರು ಚಿಕಿತ್ಸೆ ತೆಗೆದುಕೊಳ್ಳಲು ಎದುರುತ್ತಾರೆ. ಇದರ ಬದಲಿಗೆ ಪೂಜೆ, ಹೋಮ, ಮಾಟ-ಮಂತ್ರದ ಕಡೆಗೆ ಹೋಗುತ್ತಾರೆ.

ಮಾನಸಿಕ ಸಮಸ್ಯೆಗಳ ಬಗ್ಗೆ ನಮಗಿರುವ ಯೋಚನೆಗಳನ್ನು ಬದಲಾಗಿಸೋಣ. ಮಾನಸಿಕ ಆರೋಗ್ಯದ ಬಗ್ಗೆ ಮಾತನಾಡುವುದು ದೌರ್ಬಲ್ಯವಲ್ಲ; ಅದು ಧೈರ್ಯ. ಸಂಕಷ್ಟದಲ್ಲಿರುವ ವ್ಯಕ್ತಿಗೆ ಉಪದೇಶ ನೀಡುವ ಬದಲು, ಅವರ ಮಾನಸಿಕ ಸ್ಥಿತಿಯನ್ನು ಅರ್ಥ ಮಾಡಿಕೊಳ್ಳಿ. ಅವರ ಮಾತನ್ನು ಕೇಳಿ ಮತ್ತು ಅಗತ್ಯವಿದ್ದಾಗ ಮನೋವೈದ್ಯರ ಬಳಿ ಚಿಕಿತ್ಸೆಗೆ ಕರೆದುಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿ.




ಸಂಕಷ್ಟದಲ್ಲಿರುವ ವ್ಯಕ್ತಿಯ ಮಾತನ್ನು ತಾಳ್ಮೆಯಿಂದ ಆಲಿಸುವುದು, ಅವರನ್ನು ಒಂಟಿಯಾಗಿರಲು ಬಿಡದಿರುವುದು ಹಾಗೂ ಅಗತ್ಯ ವಿದ್ದಾಗ ಕುಟುಂಬದವರು, ಸ್ನೇಹಿತರು ಅಥವಾ ಮಾನಸಿಕ ಆರೋಗ್ಯ ತಜ್ಞರ ನೆರವು ಪಡೆಯುವಂತೆ ಪ್ರೋತ್ಸಾಹಿಸುವುದು ಅತ್ಯಂತ ಮುಖ್ಯ. ಒಂದು ಮಾತು, ಒಂದು ಕಾಳಜಿ, ಒಂದು ಬೆಂಬಲ ಒಂದು ಜೀವವನ್ನು ಉಳಿಸಬಹುದು.

ಡಾ.ಭಾವನ ಪ್ರಸಾದ್
ಪ್ರಾಧ್ಯಾಪಕರು, ಮನೋವೈದ್ಯ ವಿಭಾಗ
ಶ್ರೀದೇವಿ ವೈದ್ಯಕೀಯ ಆಸ್ಪತ್ರೆ, ತುಮಕೂರು
8951063034

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯು ಮಾಧ್ಯಮ ಪಟ್ಟಿಗೆ ಸೇರಿ ಪ್ರತಿ ನಿತ್ಯ ಸ್ಥಳೀಯ ಸುದ್ದಿಗಳ ಜೀವಾಳವಾಗಿದ್ದು ಕ್ಷಣ ಕ್ಷಣದ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ರಾಮನಗರ ಜಿಲ್ಲೆಯ ಎಲ್ಲಾ ತಾಲ್ಲೂಕು ಹಾಗೂ ವಿಶೇಷ ಸುದ್ದಿಗಾಗಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
ಬಿಡದಿ ಮಹೇಶ್ : ವರದಿಗಾರರರು
99728 34055



ಶ್ರೀ ಡಿ. ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಸಿದ್ದರಾಮಯ್ಯ
ಮಾನ್ಯ ನಿಕಟಪೂರ್ವ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪಮುಖ್ಯಮಂತ್ರಿಗಳು

**ಶ್ರೀ ಡಿ. ಕೆ. ಶಿವಕುಮಾರ್**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

**ವಿಧಾನ ಸೌಧ**
**ಬೆಂಗಳೂರು - 560001**

**ನಮಸ್ಕಾರ**

ಮುಖ್ಯಮಂತ್ರಿಯಾಗಿ ರಾಜ್ಯದ ಜನತೆಯ ಸೇವೆ ಮಾಡುವ ಅವಕಾಶ ನನಗೆ ದೊರೆತು ಇಂದಿಗೆ ನೂರು ದಿನಗಳು ಪೂರ್ಯೆಸಿವೆ.

ಈ ನೂರು ದಿನಗಳು ಕೇವಲ ಒಂದು ಅವಧಿಯ ಲೆಕ್ಕವಲ್ಲ. ಕೋಟ್ಯಂತರ ಕನ್ನಡಿಗರ ಬದುಕಿನಲ್ಲಿ ಬದಲಾವಣೆ ತರಬೇಕೆಂಬ ಹೊಣೆಗಾರಿಕೆಯನ್ನು ಇನ್ನಷ್ಟು ಆಳವಾಗಿ, ಗಾಢವಾಗಿ ಅರಿಯುವ ನೂರು ದಿನಗಳಾಗಿವೆ ಎಂದೇ ಭಾವಿಸುತ್ತೇನೆ.

ಜನರ ನಂಬಿಕೆ ಮತ್ತು ವಿಶ್ವಾಸದ ಮುಂದೆ ಅಧಿಕಾರ ಚಿಕ್ಕದು. ಜನರ ನಿರೀಕ್ಷೆಗಳ ಮುಂದೆ ಹುದ್ದೆ ಚಿಕ್ಕದು. ನಮ್ಮ ಮುಂದೆ ಇರುವ ಸವಾಲು, ಜವಾಬ್ದಾರಿ, ಹೊಣೆಗಾರಿಕೆ ಮಾತ್ರ ದೊಡ್ಡದು.

ಶ್ರೀ ಸಿದ್ದರಾಮಯ್ಯನವರು ನಮ್ಮ ನಾಡಿಗೆ ಸಾಮಾಜಿಕ ನ್ಯಾಯದ ಗಟ್ಟಿಯಾದ ಅಡಿಪಾಯ ಹಾಕಿಕೊಟ್ಟಿದ್ದಾರೆ. ಸರ್ಕಾರ ಎಂದರೆ ಎಲ್ಲರಿಗಾಗಿ ಇರಬೇಕು, ಅದರಲ್ಲೂ ಶೋಷಿತರ, ದಮನಿತರ ಪರವಾಗಿ ಗಟ್ಟಿಯಾಗಿ ನಿಲ್ಲಬೇಕು ಎನ್ನುವುದನ್ನು ಅವರು ತಮ್ಮ ಆಡಳಿತದ ಮೂಲಕ ಸಾಧಿಸಿ ತೋರಿಸಿದ್ದಾರೆ. ಇದೇ ಬದ್ಧತೆ ಮತ್ತು ಕಾಳಜಿಯನ್ನು ನಾನೂ ಮುಂದುವರೆಸುತ್ತಿದ್ದೇನೆ.

ನಮ್ಮ ಐದು ಗ್ಯಾರಂಟಿಗಳು ರಾಜ್ಯದ ಲಕ್ಷಾಂತರ ಕುಟುಂಬಗಳಿಗೆ ಆರ್ಥಿಕ ಚೈತನ್ಯ, ಬದುಕಿಗೆ ನೆಮ್ಮದಿ ಮತ್ತು ಭದ್ರತೆಯನ್ನು ನೀಡಿವೆ.

ಆದರೆ ಸರ್ಕಾರದ ಹೊಣೆಗಾರಿಕೆ ಇಷ್ಟಕ್ಕೇ ಮುಗಿಯುವುದಿಲ್ಲ. ಜನರಿಗೆ ಇಂದು ಏನು ಸಿಕ್ಕಿದೆ ಎನ್ನುವುದಕ್ಕಿಂತ, ನಾಳೆ ಅವರಿಗೆ ಇನ್ನೇನು ಬೇಕು ಎಂಬುದನ್ನು ಅರಿತು ಕೆಲಸ ಮಾಡುವುದು ನಮ್ಮ ದೃಷ್ಟಿಕೋನ ಮತ್ತು ಗುರಿಯಾಗಿದೆ.

ಈ ಮೊದಲ ನೂರು ದಿನಗಳಲ್ಲಿ ಆ ದಿಕ್ಕಿನಲ್ಲಿ ನಾವು ಹಲವು ಗಟ್ಟಿ ಹೆಜ್ಜೆಗಳನ್ನು ಇಟ್ಟಿದ್ದೇವೆ. **ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ 7.5% ಮೀಸಲಾತಿ, ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್‌ಗಳು, ₹29,679 ಕೋಟಿ ಮೊತ್ತದ ಹೂಡಿಕೆಗಳಿಗೆ ಅನುಮೋದನೆ ದೊರೆತಿದ್ದು, ಇದರಿಂದ ಸುಮಾರು 66,000 ಉದ್ಯೋಗಗಳು ಸೃಷ್ಟಿಯಾಗುವ ನಿರೀಕ್ಷೆ, ಯುವಜನರಲ್ಲಿ ಕ್ರೀಡೆ, ಸಂಸ್ಕೃತಿ ಮತ್ತು ವೈಜ್ಞಾನಿಕ ಮನೋಭಾವ ಬೆಳೆಸಲು 10,000 ಭಾರತ್ ಜೋಡೋ ಯುವ ಸಂಘಗಳು, ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ AI ವಿಶ್ವವಿದ್ಯಾಲಯ, 6ನೇ ತರಗತಿಯಿಂದಲೇ AI ಶಿಕ್ಷಣ, ಮೋಡ ಬಿತ್ತನೆ (Cloud Seeding), ಅತ್ಯಂತ ಹಿಂದುಳಿದ 10 ಜಿಲ್ಲೆಗಳಲ್ಲಿ 1 ಲಕ್ಷ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಯೋಜನೆ, ಖಾಲಿ ಇರುವ 72,000 ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಿರುವುದು ಹಾಗೂ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲು ನನ್ನ ನೇರ ಮೇಲ್ವಿಚಾರಣೆಯಲ್ಲಿ 'ಪ್ರಜಾ ಸೇವೆ' ಇಲಾಖೆಯ ಸ್ಥಾಪನೆಯಾಗಿದೆ.**

ಇವೆಲ್ಲ ಯೋಜನೆಗಳಿಗೂ ಬಹಳ ಬದ್ಧತೆಯಿಂದ ಈ ನೂರು ದಿನಗಳಲ್ಲಿ ಚಾಲನೆ ನೀಡಲು ನಮಗೆ ಸಾಧ್ಯವಾಗಿದೆ. ಇವನ್ನೆಲ್ಲಾ ನಾನು ಸಾಧನೆಗಳ ಪಟ್ಟಿ ಎಂದು ಹೇಳುತ್ತಿಲ್ಲ. ಇವೆಲ್ಲವೂ ಮುಂದೆ ಸಾಗಬೇಕಾಗಿರುವ ಹಾದಿಗೆ ದಿಕ್ಸೂಚಿಗಳಾಗಿವೆ.

ಜನತೆಯ ನಿರೀಕ್ಷೆಗಳು ದೊಡ್ಡವು ಎಂಬುದು ನನಗೆ ಗೊತ್ತಿದೆ.

ಅವು ದೊಡ್ಡದಾಗಿಯೇ ಇರಬೇಕು. ನಮ್ಮ ಸರ್ಕಾರ ಜನತೆಯ ಧ್ವನಿಯನ್ನು, ಜನರ ಕೂಗನ್ನು ವಿನಮ್ರತೆಯಿಂದ ಕೇಳಿಸಿಕೊಳ್ಳುತ್ತದೆ. ಜನತೆಯ ಸಾಮೂಹಿಕ ಬೇಡಿಕೆ ಮತ್ತು ಸಲಹೆಗಳನ್ನು ಸದಾ ಮುಕ್ತವಾಗಿ ಸ್ವೀಕರಿಸುತ್ತದೆ ಮತ್ತು ಪೂರಕವಾಗಿ ವರ್ತಿಸುತ್ತದೆ, ಜನತೆಗೆ ಇಷ್ಟವಿಲ್ಲದ್ದನ್ನು ಮುಲಾಜಿಲ್ಲದೆ ಹಿಂದಕ್ಕೆ ಪಡೆಯುತ್ತದೆ ಎನ್ನುವುದನ್ನು ನಮ್ಮ ಸರ್ಕಾರ ಸಾಬೀತು ಮಾಡಿದೆ.

**ದೃಢ ಕರ್ನಾಟಕ** ನನ್ನ ಸಂಕಲ್ಪ, ಸಾಮಾಜಿಕವಾಗಿ, ಆರ್ಥಿಕವಾಗಿ, ಆಧುನಿಕವಾಗಿ ದೃಢವಾದ ಮಾದರಿ ಹೆಜ್ಜೆಗಳನ್ನು ನಾವು ಇಡುತ್ತೇವೆ.

ನನ್ನ ಸರ್ಕಾರದ ಎದುರಿಗೆ ದೊಡ್ಡ ಸವಾಲುಗಳಿವೆ. ನಮ್ಮ ಅನ್ನದಾತರು "ಬರ"ಕ್ಕೆ ಸಿಲುಕಿದ್ದಾರೆ. ಈ ನೂರು ದಿನಗಳ ನಮ್ಮ ನಡೆ ಮುಂದಿನ 500 ದಿನಗಳಲ್ಲಿ ಸಾಗಬೇಕಾದ ಹಾದಿಗೆ ದಿಕ್ಸೂಚಿಯಾಗಿದೆ ಎನ್ನುವುದನ್ನು ಮತ್ತೊಮ್ಮೆ ಹೇಳುತ್ತೇನೆ. ಕರ್ನಾಟಕ ಅವಕಾಶಗಳಿಗಾಗಿ ಕಾಯುವುದಿಲ್ಲ. **ಅವಕಾಶಗಳನ್ನು ಸೃಷ್ಟಿಸುತ್ತದೆ**

ಆದರೆ, ನಮ್ಮ ನಾಡಿಗೆ ಪ್ರಗತಿ, ಕಲ್ಯಾಣ ಮತ್ತು ಅಭಿವೃದ್ಧಿಯ ಅದ್ಭುತ ಚರಿತ್ರೆ ಇದೆ. ಎಂಥಾದ್ದೇ ಸವಾಲುಗಳನ್ನು ದಿಟ್ಟತನದಿಂದ ಎದುರಿಸಿ, ಪರಿಹರಿಸುವ **ಚೈತನ್ಯವನ್ನು ನಾನು ನಮ್ಮ ನಾಡಿನ ಚರಿತ್ರೆಯಿಂದ ಒದಗಿಸಿಕೊಳ್ಳುತ್ತೇನೆ.** ಇದೇ ನನ್ನ ಮಣ್ಣಿನ ಗುಣ.

ಈ ಬಲವಾದ ನಂಬಿಕೆ ಮತ್ತು ವಿಶ್ವಾಸದಿಂದ **ನಮ್ಮ ಸಂಪುಟದ ಪೂರ್ಣ ಸಹಕಾರದೊಂದಿಗೆ ಸವಾಲನ್ನು ಗೆದ್ದು, ಸಾಧಿಸುತ್ತೇವೆ. ನನ್ನ ಉಸಿರಿರುವವರೆಗೂ ಈ ಮಣ್ಣಿನ ಋಣವನ್ನು ತೀರಿಸಲು, ನನ್ನ ಜನರ ಬದುಕನ್ನು ಸುಧಾರಿಸಲು ಶ್ರಮಿಸುತ್ತೇನೆ ಎನ್ನುವ ಸಂಕಲ್ಪ ಹೊಂದಿದ್ದೇನೆ.**

**ಸದಾ ನಿಮ್ಮ ಸೇವೆಯಲ್ಲಿ,**

**ಡಿ. ಕೆ. ಶಿವಕುಮಾರ್**
ಪ್ರಜಾಸೇವಕ



ದೃಢ ಕರ್ನಾಟಕದ ಸಂಕಲ್ಪ
ಶತಕದ ಪಥ ಪ್ರಗತಿಯ ರಥ

100 ದಿನ - 100 ಹೆಜ್ಜೆ - ಒಂದೇ ಸಂಕಲ್ಪ
ದೃಢ ಕರ್ನಾಟಕದ ಸಂಕಲ್ಪ

ಗೃಹಲಕ್ಷ್ಮಿ ಅನ್ನಭಾಗ್ಯ ಗೃಹ ಜ್ಯೋತಿ ಯುವನಿಧಿ ಶಕ್ತಿ

CMofKarnataka https://dipr.karnataka.gov.in/ Karnatakavarthe ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಬ್ರಾಹ್ಮಣ ಸಮುದಾಯದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು